# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 154, ಬಸವನಗುಡಿ ಬೆಂಗಳೂರು.

ಸಂಖ್ಯೆ: ಸ.ಅ/ವಾ–154/2022–23 ದಿನಾಂಕ: 22–08–2022

### ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020–21, ದಿನಾಂಕ: 21–09–2020ರ ಆದೇಶದಂತೆ ದಿನಾಂಕ: 20–08–2022 ಶನಿವಾರ ವಾರ್ಡ್ ಸಂಖ್ಯೆ: 154, ಬಸವನಗುಡಿ ವಾರ್ಡ್ ಕಛೇರಿಯಲ್ಲಿ ನಡೆದ ಆಗಸ್ಟ್ ತಿಂಗಳ 2ನೇ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ: ಬಿಬಿಎಂಪಿ ವಾರ್ಡ್ ಕಛೇರಿ, ಬಸವನಗುಡಿ, ಎನ್.ಆರ್. ಕಾಲೋನಿ ಹತ್ತಿರ
ಸಮಯ: ಬೆಳಿಗ್ಗೆ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಮಂಜುನಾಥ ರೆಡ್ಡಿ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 2 | ಶ್ರೀ ರಾಜೇಶ್ ಕೆ.ಎನ್ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬಸವನಗುಡಿ ಉಪವಿಭಾಗ |
| 3 | ಶ್ರೀ ಟಿ. ಕೃಷ್ಣಮೂರ್ತಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್–154, ಬಸವನಗುಡಿ |
| 4 | ಕು. ಮಂಜುಶ್ರೀ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 5 | ಡಾ॥ ದೀಕ್ಷಿತ್ | ಆರೋಗ್ಯ ವೈದ್ಯಾಧಿಕಾರಿ |
| | ಶ್ರೀಮತಿ. ಮಾಲಿನಿ. ಎಂ | ಬೀದಿ ದೀಪ ನಿರ್ವಹಣೆ |
| 6 | ಶ್ರೀ. ಮುನಿರಾಜು | ಬೆಸ್ಕಾಂ ಅಧಿಕಾರಿ |
| 7 | ಶ್ರೀ. ಅಂದಾನಯ್ಯ | ಸಂಚಾರ ಪೋಲೀಸ್, ಬಸವನಗುಡಿ |
| 8 | ಶ್ರೀ. ದೊರೆ | ಸಾರ್ವಜನಿಕರು |
| 9 | ಶ್ರೀ. ಅಕ್ಷಯ ಜಿ. ಕುಂಬ್ಳೆ | ಸಾರ್ವಜನಿಕರು |
| 10 | ಶ್ರೀ. ನಿತಿನ್ ಅರಸ್ | ಸಾರ್ವಜನಿಕರು |
| 11 | ಶ್ರೀ. ಸತೀಶ್ ಉರಾಳ್ | ಸಾರ್ವಜನಿಕರು |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ. ಮಂಜುನಾಥ ರೆಡ್ಡಿ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

1. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ ಸಂಬಂಧಿಸಿದ ಸಮಸ್ಯೆಗಳ ಬಗ್ಗೆ ಚರ್ಚಿಸಲಾಗಿ ಸಭೆಯಲ್ಲಿ ಸಹಾಯಕ ಅಭಿಯಂತರರು ಹಾಜರಿರುತ್ತಾರೆ. ವಾರ್ಡ್ ವ್ಯಾಪ್ತಿಯಲ್ಲಿನ ಪೂರ್ವ ಆಂಜನೇಯ ರಸ್ತೆ, ಬ್ಯೂಗಲ್‌ರಾಕ್ ರಸ್ತೆಗಳಲ್ಲಿ ನೀರಿನ ಕೊಳವೆಯು ಹಾಳಾಗಿ ಹೆಚ್ಚು ನೀರು ಪೋಲಾಗುತ್ತಿದ್ದು ಈ ಬಗ್ಗೆ ಕ್ರಮಕೈಗೊಳ್ಳಲು ವಾರ್ಡ್ ಅಭಿಯಂತರರು ತಿಳಿಸಿರುತ್ತಾರೆ. ಹಾಗೂ 2ನೇ ಮುಖ್ಯರಸ್ತೆ, 11ನೇ ಅಡ್ಡರಸ್ತೆಗಳಲ್ಲೂ ಸಹ ನೀರಿನ ಕೊಳವೆಯು ಹಾಳಾಗಿದ್ದು ಹೆಚ್ಚುವರಿ ನೀರು ರಸ್ತೆಯ ಮೇಲೆ ಹರಿಯುತ್ತಿರುವುದರಿಂದ ರಸ್ತೆಗಳಲ್ಲಿ ರಸ್ತೆ ಗುಂಡಿಗಳು ಉಂಟಾಗುತ್ತಿದ್ದು ಈ ಬಗ್ಗೆ ಕ್ರಮಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.



Scanned with CamScanner

ಸಭೆಯಲ್ಲಿ ಸಂಚಾರಿ ಪೋಲೀಸರು ಹಾಜರಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿನ ಕೆಲವು ರಸ್ತೆಗಳಲ್ಲಿ ತಳ್ಳುವ ಗಾಡಿಗಳನ್ನು ತೆರವುಗೊಳಿಸಲು ಹಾಗೂ ಕೆಲವು ರಸ್ತೆಗಳಲ್ಲಿ ತುಂಬಾ ದಿನಗಳಿಂದ ನಿಲ್ಲಿಸಿರುವ ಬೀಡಾಡಿ ವಾಹನಗಳ ತೆರವುಗೊಳಿಸುವ ಬಗ್ಗೆ ಕ್ರಮಕೈಗೊಳ್ಳುವಂತೆ ಹಾಗೂ ಸುಬ್ಬರಾಮಚೆಟ್ಟಿ ರಸ್ತೆಯಲ್ಲಿ ಸಂಚಾರಿ ಪೋಲೀಸ್ ರನ್ನು ಕರ್ತವ್ಯ ನಿರ್ವಹಿಸಲು ನಿಗಧಿತ ಸಮಯವನ್ನು ನಿಗಧಿಪಡಿಸಿ ಕ್ರಮಕೈಗೊಳ್ಳಲು ಕೋರಿರುತ್ತಾರೆ. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಪೋಲೀಸ್ ಅಧಿಕಾರಿಗಳಾದ ಅಂದಾನಯ್ಯ ರವರು ಕ್ರಮಕೈಗೊಳ್ಳುವ ಬಗ್ಗೆ ಸಭೆಯಲ್ಲಿ ತಿಳಿಸಿರುತ್ತಾರೆ.

ವಾರ್ಡ್ ವ್ಯಾಪ್ತಿಯಲ್ಲಿನ ನಾಗಸಂದ್ರ ರಸ್ತೆ, ಡಿ.ವಿ.ಜಿ ರಸ್ತೆ ಹಾಗೂ ಇನ್ನಿತರ ಪ್ರಮುಖ ರಸ್ತೆಗಳಲ್ಲಿ ಬೀದಿದೀಪಗಳು ಕೆಟ್ಟಿರುವ ಬಗ್ಗೆ ಕ್ರಮಕೈಗೊಳ್ಳಲು ಹಾಗೂ ಎಲ್.ಇ.ಡಿ ಬೀದಿ ದೀಪಗಳನ್ನು ಅಳವಡಿಸಲು ಸಭೆಯಲ್ಲಿ ಸಾರ್ವಜನಿಕರು ಕೋರಿದ್ದು, ಈ ಬಗ್ಗೆ ಕೂಡಲೇ ಕ್ರಮವಹಿಸಲು ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ಬೀದಿ ದೀಪಗಳ ನಿರ್ವಹಣಾ ಗುತ್ತಿಗೆದಾರರಿಗೆ ಸೂಚಿಸಿರುತ್ತಾರೆ.

ವಾರ್ಡ್ ವ್ಯಾಪ್ತಿಯಲ್ಲಿನ ಪೋಲೀಸ್ ಠಾಣಾ ರಸ್ತೆ, ಸುಬ್ಬರಾಮಚೆಟ್ಟಿ ರಸ್ತೆ ಹಾಗೂ ಇನ್ನಿತರ ರಸ್ತೆಗಳಲ್ಲಿ ಬೀಳುವ ಹಂತದಲ್ಲಿ ಮರವನ್ನು ಕತ್ತರಿಸಲಾಗಿದ್ದು, ಕತ್ತರಿಸಿರುವ ಮರದ ಬೃಹತ್ ರೆಂಬೆ ಕೊಂಬೆಗಳನ್ನು ತೆರವುಗೊಳಿಸಿಕೊಡಲು ಸಭೆಯಲ್ಲಿ ಸಾರ್ವಜನಿಕರು ಕೋರಿದ್ದು, ಈ ಬಗ್ಗೆ ಪಾಲಿಕೆಯ ಅರಣ್ಯ ಇಲಾಖೆಯವರಿಗೆ ಸೂಚಿಸಿ ಅನುಪಯುಕ್ತ ಮರದ ರೆಂಬೆ ಕೊಂಬೆಗಳನ್ನು ತೆರವುಗೊಳಿಸಲು ಕ್ರಮಕೈಗೊಳ್ಳುವುದಾಗಿ ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿರುತ್ತಾರೆ.

ಈ ಹಿಂದೆ ಆರೋಗ್ಯ ವೈದ್ಯಾಧಿಕಾರಿಗಳು ಕೇಳಿರುವಂತೆ ಸರ್ಕಾರಿ ಯೋಜನೆಯಾದ ನಮ್ಮ ಕ್ಲಿನಿಕ್‌ನ ಪ್ರಾರಂಭಕ್ಕೆ ವಾರ್ಡ್ ವ್ಯಾಪ್ತಿಯಲ್ಲಿನ ಕಬ್ಬಡಿ ಕ್ರೀಡಾಂಗಣದಲ್ಲಿನ ಕಟ್ಟಡವನ್ನು ಉಪಯೋಗಿಸಿಕೊಳ್ಳಲು ವಾರ್ಡ್ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ವೈದ್ಯಾಧಿಕಾರಿಗಳಿಗೆ ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಪರಿಗಣಿಸಿ ಅಧ್ಯಕ್ಷರು ರವರು ಸಂಬಂಧಪಟ್ಟ ಇಲಾಖೆಗಳಾದ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಆರೋಗ್ಯ ಇಲಾಖೆ, ಕಾಮಗಾರಿ ಇಲಾಖೆ ಹಾಗೂ ಘನತ್ಯಾಜ್ಯ ವಿಭಾಗದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಸಭೆಯಲ್ಲಿ ಚರ್ಚಿಸಿದ್ದು, ಈ ವಿಷಯಗಳ ಬಗ್ಗೆ ಮುಂದಿನ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಅಧ್ಯಕ್ಷರು ಮುಕ್ತಾಯಗೊಳಿಸಿದರು.

[signature]
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 154, ಬಸವನಗುಡಿ

[signature] 20/8
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 154, ಬಸವನಗುಡಿ

Scanned with CamScanner